# All India Radio: Bangalore
# National Bulletin In Kannada
# 03.07.2026 07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**03.07.2026 07.35 a.m.**

---

ಮುಖ್ಯಾಂಶಗಳು

೧. ನವದೆಹಲಿಯಲ್ಲಿ ಇಂದು ಪಂಚಾಯತ್ ರಾಜ್ ಸಚಿವರ ರಾಷ್ಟ್ರೀಯ ಕಾರ್ಯಾಗಾರ

೨. ವಾರ್ಷಿಕ ಅಮರನಾಥ ಯಾತ್ರೆ ಇಂದಿನಿಂದ ಆರಂಭ; ಎರಡು ಮಾರ್ಗಗಳಲ್ಲಿ ಯಾತ್ರಾರ್ಥಿಗಳ ಪ್ರಯಾಣ

೩. ಉಕ್ರೇನ್ ದಾಳಿಯಲ್ಲಿ ರಷ್ಯಾದ ೩೭ ನಾಗರಿಕರು ಹತ; ಕಟ್ಟಡ ಧ್ವಂಸ

೪. ಫಿಫಾ ವಿಶ್ವಕಪ್ ಫುಟ್‌ಬಾಲ್; ೩೨ರ ಸುತ್ತಿನ ಪಂದ್ಯದಲ್ಲಿಂದು ಸ್ವಿಟ್ಜರ್‌ಲೆಂಡ್-ಅಲ್ಜೀರಿಯಾ ಮುಖಾಮುಖಿ

---

ಹದಿನಾರನೇ ಹಣಕಾಸು ಆಯೋಗದ ಶಿಫಾರಸುಗಳ ಕುರಿತು ಚರ್ಚಿಸಲು ಕೇಂದ್ರ ಪಂಚಾಯತ್ ರಾಜ್ ಸಚಿವಾಲಯ ಇಂದು ನವದೆಹಲಿಯಲ್ಲಿ ರಾಜ್ಯಗಳ ಪಂಚಾಯತ್ ರಾಜ್ ಸಚಿವರ ರಾಷ್ಟ್ರೀಯ ಕಾರ್ಯಾಗಾರವನ್ನು ಆಯೋಜಿಸಿದೆ.

ಕೇಂದ್ರ ಪಂಚಾಯತ್ ರಾಜ್ ಸಚಿವ ರಾಜೀವ್ ರಂಜನ್ ಸಿಂಗ್ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕಾರ್ಯಾಗಾರದಲ್ಲಿ, ಕೇಂದ್ರ ಪಂಚಾಯತ್ ರಾಜ್ ರಾಜ್ಯ ಸಚಿವ ಪ್ರೊ. ಎಸ್.ಪಿ.ಸಿಂಗ್ ಬಘೇಲ್ ಉಪಸ್ಥಿತರಿರಲಿದ್ದಾರೆ.

ಹಣಕಾಸು ಸಚಿವಾಲಯದ ವೆಚ್ಚ ಇಲಾಖೆ ಹೊರಡಿಸಿರುವ ಹದಿನಾರನೇ ಹಣಕಾಸು ಆಯೋಗದ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಅನುದಾನ ಅನುಷ್ಠಾನಕ್ಕೆ ಸಂಬಂಧಿಸಿದ ಕಾರ್ಯಾಚರಣಾ ಮಾರ್ಗಸೂಚಿಗಳ ಕುರಿತು ಕಾರ್ಯಾಗಾರದಲ್ಲಿ ವಿಸ್ತೃತ ಚರ್ಚೆ ನಡೆಯಲಿದೆ.

ಪಂಚಾಯತ್ ರಾಜ್ ಸಂಸ್ಥೆಗಳ ಸ್ವಂತ ಆದಾಯ ಮೂಲಗಳ ಕ್ರೋಢೀಕರಣವನ್ನು ಹೆಚ್ಚಿಸುವ ಮೂಲಕ ಅವುಗಳ ಆರ್ಥಿಕ ಸ್ವಾವಲಂಬನೆಯನ್ನು ಬಲಪಡಿಸುವ ವಿಷಯಕ್ಕೆ ವಿಶೇಷ ಆದ್ಯತೆ ನೀಡಲಾಗುತ್ತದೆ.

ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ತಮ್ಮ ಅತ್ಯುತ್ತಮ ಕಾರ್ಯಪದ್ಧತಿಗಳನ್ನು ಹಂಚಿಕೊಳ್ಳಲು, ಅನುಷ್ಠಾನದ ವೇಳೆ ಎದುರಾಗುತ್ತಿರುವ ಸವಾಲುಗಳ ಕುರಿತು ಚರ್ಚಿಸಲು ಹಾಗೂ ಹಣಕಾಸು ಆಯೋಗದ ಅನುದಾನವನ್ನು ಪರಿಣಾಮಕಾರಿಯಾಗಿ ಬಳಸುವ ಕಾರ್ಯತಂತ್ರಗಳನ್ನು ವಿನಿಮಯ ಮಾಡಿಕೊಳ್ಳಲು ಈ ಕಾರ್ಯಾಗಾರ ವೇದಿಕೆಯಾಗಲಿದೆ.

ಈ ಚರ್ಚೆಗಳು ಕೇಂದ್ರ ಮತ್ತು ರಾಜ್ಯಗಳ ನಡುವಿನ ಸಹಕಾರವನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ, ಪಂಚಾಯತ್ ರಾಜ್ ಸಂಸ್ಥೆಗಳಿಗೆ ಹಣಕಾಸು ಆಯೋಗದ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಲು ದೃಢವಾದ ಅನುಷ್ಠಾನ ವ್ಯವಸ್ಥೆಯನ್ನು ರೂಪಿಸುವಲ್ಲಿ ನೆರವಾಗಲಿವೆ.

ಇದರ ಮೂಲಕ ಉತ್ತಮ ಆಡಳಿತ, ಮೂಲಸೌಕರ್ಯ, ಸಾರ್ವಜನಿಕ ಸೇವೆಗಳು ಹಾಗೂ ಸಮಗ್ರ ಗ್ರಾಮೀಣ ಅಭಿವೃದ್ಧಿಯನ್ನು 'ವಿಕಸಿತ ಭಾರತ-೨೦೪೭' ಪರಿಕಲ್ಪನೆಗೆ ಅನುಗುಣವಾಗಿ ಮತ್ತಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಗುರಿ ಹೊಂದಲಾಗಿದೆ.

---

ಪಶ್ಚಿಮ ಬಂಗಾಳ ವಿಧಾನಸಭೆಗೆ ನೂತನವಾಗಿ ಆಯ್ಕೆಯಾಗಿರುವ ಸದಸ್ಯರಿಗಾಗಿ ಆಯೋಜಿಸಿರುವ ಎರಡು ದಿನಗಳ ಕಾರ್ಯಾಗಾರವನ್ನು ಲೋಕಸಭಾಧ್ಯಕ್ಷ ಓಂ ಬಿರ್ಲಾ ಇಂದು ಕೋಲ್ಕತ್ತಾದಲ್ಲಿ ಉದ್ಘಾಟಿಸಲಿದ್ದಾರೆ.

ನೂತನ ಸದಸ್ಯರಿಗೆ ಸಂಸದೀಯ ಹಾಗೂ ವಿಧಾನಮಂಡಲದ ಕಾರ್ಯನಿರ್ವಹಣೆಯ ವಿವಿಧ ಆಯಾಮಗಳಾದ ಸಮಿತಿ ವ್ಯವಸ್ಥೆ, ಹಣಕಾಸು ಮೇಲ್ವಿಚಾರಣೆ, ಸಂಸದೀಯ ವಿಶೇಷಾಧಿಕಾರಗಳು ಹಾಗೂ ವಿಧಾನಮಂಡಲಗಳಲ್ಲಿ ಅಳವಡಿಸಲಾಗುತ್ತಿರುವ ಡಿಜಿಟಲ್ ಉಪಕ್ರಮಗಳ ಕುರಿತು ಪರಿಚಯ ಕಲ್ಪಿಸುವುದು ಈ ಕಾರ್ಯಾಗಾರದ ಉದ್ದೇಶವಾಗಿದೆ.

ಈ ಕಾರ್ಯಕ್ರಮವು ಶಾಸಕರು, ಸಭಾಧ್ಯಕ್ಷರು ಹಾಗೂ ಸಂಸದೀಯ ತಜ್ಞರ ನಡುವೆ ಸಂವಾದ ಮತ್ತು ಅನುಭವ ವಿನಿಮಯಕ್ಕೆ ವೇದಿಕೆಯಾಗಲಿದೆ.

---

ಕೃತಕ ಬುದ್ಧಿಮತ್ತೆ ಇನ್ನು ಆಯ್ಕೆಯ ವಿಷಯವಾಗಿ ಇರದೇ, ಸುಶಾಸನದ ಅವಿಭಾಜ್ಯ ಅಂಗವಾಗಿದೆ. ಕೃತಕ ಬುದ್ಧಿಮತ್ತೆಯನ್ನು ಜವಾಬ್ದಾರಿಯುತವಾಗಿ ಹಾಗೂ ವಿವೇಕಯುತವಾಗಿ ಬಳಸುವ ಅಗತ್ಯವಿದೆ ಎಂದು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ.

ಜೈಪುರದಲ್ಲಿ ನಡೆದ ೨೯ನೇ ರಾಷ್ಟ್ರೀಯ ಇ-ಆಡಳಿತ ಸಮ್ಮೇಳನದ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, 'ವಿಕಸಿತ ಭಾರತ-೨೦೪೭' ಗುರಿ ಸಾಧಿಸಲು ಆಡಳಿತ ವ್ಯವಸ್ಥೆಯ ಚಿಂತನಾ ವಿಧಾನದಲ್ಲಿ ಮೂಲಭೂತ ಬದಲಾವಣೆ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

’ಕನಿಷ್ಠ ಸರ್ಕಾರ, ಗರಿಷ್ಠ ಆಡಳಿತ’ ಎಂಬ ಕೇಂದ್ರ ಸರ್ಕಾರದ ಧ್ಯೇಯವಾಕ್ಯವು ನಾಗರಿಕ ಕೇಂದ್ರಿತ, ಪಾರದರ್ಶಕ ಮತ್ತು ಹೊಣೆಗಾರಿಕೆಯ ಆಡಳಿತ ವ್ಯವಸ್ಥೆ ನಿರ್ಮಾಣಕ್ಕೆ ಮಾರ್ಗದರ್ಶಿಯಾಗಿದೆ. ಸಮರ್ಥ ಆಡಳಿತಕ್ಕೆ ಅಡ್ಡಿಯಾಗಿದ್ದ ಸುಮಾರು ೨ ಸಾವಿರ ಹಳೆಯ ಮತ್ತು ಬಳಕೆಯಲ್ಲಿಲ್ಲದ ನಿಯಮಗಳನ್ನು ಕೇಂದ್ರ ಸರ್ಕಾರ ರದ್ದುಪಡಿಸಿದೆ. ದಾಖಲೆಗಳ ಕಡ್ಡಾಯ ದೃಢೀಕರಣ ಸೇರಿದಂತೆ ಹಲವು ಪ್ರಕ್ರಿಯಾತ್ಮಕ ನಿಯಮಗಳನ್ನು ಸಹ ಕೈಬಿಡಲಾಗಿದೆ ಎಂದು ಡಾ. ಜಿತೇಂದ್ರ ಸಿಂಗ್ ತಿಳಿಸಿದರು.

---

ವಾರ್ಷಿಕ ಅಮರನಾಥ ಯಾತ್ರೆ ಇಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ಮತ್ತು ಬಾಲ್ಟಾಲ್ ಎರಡೂ ಮಾರ್ಗಗಳಿಂದ ಪ್ರಾರಂಭವಾಗಲಿದೆ.

ರಕ್ಷಾ ಬಂಧನ ಹಬ್ಬದೊಂದಿಗೆ ಆಗಸ್ಟ್ ೨೮ ರಂದು ಯಾತ್ರೆ ಮುಕ್ತಾಯಗೊಳ್ಳಲಿದೆ. ಯಾತ್ರಿಕರ ಮೊದಲ ತಂಡ, ಬಿಗಿ ಭದ್ರತೆಯಲ್ಲಿ ನಿನ್ನೆ ಅನಂತ್‌ನಾಗ್ ಜಿಲ್ಲೆಯ ನುನ್ವಾನ್ ಮತ್ತು ಗಂಡೇರ್‌ಬಾಲ್ ಜಿಲ್ಲೆಯ ಬಾಲ್ಟಾಲ್‌ನಲ್ಲಿರುವ ಅವಳಿ ಮೂಲ ಶಿಬಿರಗಳನ್ನು ತಲುಪಿತು.

---

ಉತ್ತರಾಖಂಡದ ಪಿಥೋರಾಗಢ ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಯಾತ್ರಾರ್ಥಿಗಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಆದಿ ಕೈಲಾಸ ಹಾಗೂ ಓಂ ಪರ್ವತ ಯಾತ್ರೆಗೆ ನೀಡಲಾಗುತ್ತಿದ್ದ ಅನುಮತಿ ಪತ್ರಗಳ ವಿತರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.

ಈ ಕುರಿತು ಮಾಹಿತಿ ನೀಡಿದ ಧಾರ್ಚುಲಾ ಉಪ ವಿಭಾಗಾಧಿಕಾರಿ ಆಶಿಷ್ ಜೋಶಿ, ಪ್ರಸ್ತುತ ಹವಾಮಾನ ಪರಿಸ್ಥಿತಿಯನ್ನು ಪರಿಶೀಲಿಸಿದ ಬಳಿಕ ಅನುಮತಿ ಪತ್ರಗಳ ವಿತರಣೆಯನ್ನು ಪುನರಾರಂಭಿಸುವ ಕುರಿತು ಜಿಲ್ಲಾಡಳಿತ ನಿರ್ಧಾರ ಕೈಗೊಳ್ಳಲಿದೆ ಎಂದು ತಿಳಿಸಿದ್ದಾರೆ.

---

ಬಿಹಾರದ ರಾಜ್ಯಪಾಲ ನಿವೃತ್ತ ಲೆಫ್ಟಿನೆಂಟ್ ಜನರಲ್ ಸೈಯದ್ ಅತಾ ಹಸ್ನೈನ್ ಮತ್ತು ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಪಬಿತ್ರ ಮಾರ್ಗರಿಟಾ ಅವರು ಇಂದು ಇರಾನ್‌ಗೆ ಭೇಟಿ ನೀಡಲಿದ್ದಾರೆ.

ಇವರು ಇರಾನ್‌ನ ಮಾಜಿ ಸರ್ವೋಚ್ಚ ನಾಯಕ ದಿವಂಗತ ಅಯತೊಲ್ಲಾ ಸಯ್ಯದ್ ಅಲಿ ಖಮೇನಿ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲಿದ್ದಾರೆ.

ಉನ್ನತ ಮಟ್ಟದ ಪ್ರಾತಿನಿಧ್ಯವು ಎರಡೂ ದೇಶಗಳ ನಡುವಿನ ಜನರಿಂದ ಜನರ ಸಂಪರ್ಕ ಸೇರಿದಂತೆ ನಾಗರಿಕ ಸಂಬಂಧಗಳ ಮಹತ್ವವನ್ನು ಒತ್ತಿಹೇಳುತ್ತದೆ. ಅಲ್ಲದೇ ರಾಜಕೀಯ ಮತ್ತು ಆರ್ಥಿಕ ತೊಡಗಿಸಿಕೊಳ್ಳುವಿಕೆಗಳಿಗೆ ಬಲವಾದ ಅಡಿಪಾಯವನ್ನು ಒದಗಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಉಕ್ರೇನ್ ರಾಜಧಾನಿ ಕೈವ್ ಮೇಲೆ ರಷ್ಯಾ ನಡೆಸಿದ ಬೃಹತ್ ಡ್ರೋನ್ ಮತ್ತು ಕ್ಷಿಪಣಿ ದಾಳಿಯಲ್ಲಿ ೨೭ ಜನರು ಮೃತಪಟ್ಟಿದ್ದು, ೯೦ ಮಂದಿ ಗಾಯಗೊಂಡಿದ್ದಾರೆ.

ಕೈವ್‌ನಾದ್ಯಂತ ೩೦ ಸ್ಥಳಗಳ ಮೇಲೆ ದಾಳಿಯಾಗಿದ್ದು, ಮುಖ್ಯವಾಗಿ ವಸತಿ ಕಟ್ಟಡಗಳು ಮತ್ತು ನಾಗರಿಕ ಮೂಲಸೌಕರ್ಯ ಹಾನಿಯಾಗಿವೆ.

ಬುಧವಾರ ರಾತ್ರಿ ನಡೆದ ಮಾರಕ ಬಾಂಬ್ ದಾಳಿಯು, ನಾಗರಿಕ ಮೂಲಸೌಕರ್ಯದ ಮೇಲೆ ಉಕ್ರೇನ್ ನಡೆಸಿದ ದೀರ್ಘ-ಶ್ರೇಣಿಯ ದಾಳಿಗೆ ಪ್ರತಿಕ್ರಿಯೆಯಾಗಿದೆ ಎಂದು ರಷ್ಯಾದ ರಕ್ಷಣಾ ಸಚಿವಾಲಯ ತಿಳಿಸಿದೆ.

---

ಥೈಲ್ಯಾಂಡ್‌ನಲ್ಲಿ ನಿನ್ನೆ, ಈಶಾನ್ಯ ಮುಕ್ದಹಾನ್ ಪ್ರಾಂತ್ಯದಲ್ಲಿ ತೀರ್ಥಯಾತ್ರೆಯ ನಡಿಗೆಯಲ್ಲಿ ತೊಡಗಿದ್ದ ಸನ್ಯಾಸಿಗಳ ಗುಂಪಿನ ಮೇಲೆ ೧೧ ವರ್ಷದ ಬಾಲಕನೊಬ್ಬ ಪಿಕಪ್ ಟ್ರಕ್ ಡಿಕ್ಕಿ ಹೊಡೆದ ಪರಿಣಾಮ ಒಂಬತ್ತು ಸನ್ಯಾಸಿಗಳು ಸಾವನ್ನಪ್ಪಿದ್ದಾರೆ.

ಮುಕ್ದಹಾನ್ ಪ್ರಾಂತ್ಯದ ಒಟ್ಟು ೩೫ ಸನ್ಯಾಸಿಗಳು ತೀರ್ಥಯಾತ್ರೆಯಲ್ಲಿದ್ದರು. ಐದು ಸನ್ಯಾಸಿಗಳು ಸ್ಥಳದಲ್ಲೇ ಸಾವನ್ನಪ್ಪಿದ್ದು, ಇತರ ನಾಲ್ವರು ಆಸ್ಪತ್ರೆಯಲ್ಲಿ ನಿಧನರಾದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

---

ಸಿರಿಯಾದ ಡಮಾಸ್ಕಸ್‌ನ ಕೆಫೆಯೊಂದರಲ್ಲಿ ನಿನ್ನೆ ಸ್ಫೋಟಕ ಸಾಧನವೊಂದು ಸ್ಫೋಟಗೊಂಡ ಪರಿಣಾಮ ಕನಿಷ್ಠ ಒಂಬತ್ತು ಜನರು ಮೃತಪಟ್ಟಿದ್ದಾರೆ.

ಸಿರಿಯಾದ ರಾಜಧಾನಿಯ ಹೆಜಾಜ್ ಜಿಲ್ಲೆಯ ನ್ಯಾಯಾಂಗ ಅರಮನೆಯಿಂದ ೧೦೦ ಮೀಟರ್ ದೂರದಲ್ಲಿರುವ ಕೆಫೆಯೊಳಗೆ ಸ್ಫೋಟಕ ಸಾಧನವನ್ನು ಇರಿಸಲಾಗಿತ್ತು ಎಂದು ಸಿರಿಯಾದ ಆಂತರಿಕ ಸಚಿವಾಲಯ ತಿಳಿಸಿದೆ.

---

ಅಂತಾರಾಷ್ಟ್ರೀಯ ಪ್ರಯಾಣಿಕರ ಆರೋಗ್ಯ ತಪಾಸಣೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿಸುವ ಉದ್ದೇಶದಿಂದ ಕೇಂದ್ರ ನಾಗರಿಕ ವಿಮಾನಯಾನ ಸಚಿವಾಲಯ, ಏರ್ ಸುವಿಧಾ ೨.೦ ಪೋರ್ಟಲ್ ಅನ್ನು ದೇಶದ ಎಲ್ಲ ಪ್ರವೇಶ ಕೇಂದ್ರಗಳಲ್ಲಿ ಇಬೋಲಾ ಆರೋಗ್ಯ ತಪಾಸಣೆಗಾಗಿ ಆರಂಭಿಸಿದೆ.

ಆರೋಗ್ಯ ಸೇವೆಗಳ ಮಹಾನಿರ್ದೇಶನಾಲಯ ಹಾಗೂ ದೆಹಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ ಸಹಯೋಗದಲ್ಲಿ ಅಭಿವೃದ್ಧಿಪಡಿಸಿರುವ ಈ ನವೀಕೃತ ಡಿಜಿಟಲ್ ವೇದಿಕೆಯು, ಆರೋಗ್ಯ, ವಲಸೆ ಹಾಗೂ ನಿಗಾ ಸಂಸ್ಥೆಗಳ ನಡುವೆ ತಕ್ಷಣದ ಸಮನ್ವಯದ ಮೂಲಕ ಅಪಾಯದ ಸಾಧ್ಯತೆ ಇರುವ

ಅಂತಾರಾಷ್ಟ್ರೀಯ ಪ್ರಯಾಣಿಕರನ್ನು ಆರಂಭಿಕ ಹಂತದಲ್ಲೇ ಗುರುತಿಸಿ, ಆರೋಗ್ಯ ನಿಗಾವನ್ನು ಬಲಪಡಿಸುವ ಗುರಿ ಹೊಂದಿದೆ.

ಏರ್ ಸುವಿಧಾ ೨.೦ ಪೋರ್ಟಲ್‌ನಲ್ಲಿ ಸಂಪೂರ್ಣ ಸಂಪರ್ಕರಹಿತ ಹಾಗೂ ಕಾಗದರಹಿತ ಆರೋಗ್ಯ ಸ್ವಯಂ ಘೋಷಣೆ ವ್ಯವಸ್ಥೆಯನ್ನು ಅಳವಡಿಸಲಾಗಿದೆ. ಹೊಸ ವ್ಯವಸ್ಥೆಯಡಿ ಅಂತಾರಾಷ್ಟ್ರೀಯ ಪ್ರಯಾಣಿಕರು ಭಾರತಕ್ಕೆ ಆಗಮಿಸುವ ೨೪ ಗಂಟೆಗಳ ಮುಂಚಿತವಾಗಿ ತಮ್ಮ ಆರೋಗ್ಯ ಸ್ವಯಂ ಘೋಷಣೆಯನ್ನು ಆನ್‌ಲೈನ್‌ನಲ್ಲಿ ಸಲ್ಲಿಸಬಹುದಾಗಿದೆ. ಇದರಿಂದ ವಲಸೆ ಪ್ರಕ್ರಿಯೆ ತ್ವರಿತಗೊಳ್ಳುವುದರ ಜೊತೆಗೆ ದೇಶದ ವಿವಿಧ ಪ್ರವೇಶ ಕೇಂದ್ರಗಳಲ್ಲಿ ಆರೋಗ್ಯ ತಪಾಸಣೆಯನ್ನು ಸುಗಮ ಹಾಗೂ ಪರಿಣಾಮಕಾರಿಯಾಗಿ ನಡೆಸಲು ಅನುಕೂಲವಾಗಲಿದೆ.

____________

ವ್ಯಾಂಕೂವರ್‌ನಲ್ಲಿ ನಡೆಯಲಿರುವ ಫಿಫಾ ವಿಶ್ವಕಪ್ ಫುಟ್‌ಬಾಲ್ ಪಂದ್ಯಾವಳಿಯ ೩೨ ರ ಸುತ್ತಿನ ಪಂದ್ಯದಲ್ಲಿ ಇಂದು ಸ್ವಿಟ್ಜರ್‌ಲೆಂಡ್ ತಂಡ, ಅಲ್ಜೀರಿಯಾ ತಂಡವನ್ನು ಎದುರಿಸಲಿದೆ.

ಪಂದ್ಯ ಭಾರತೀಯ ಕಾಲಮಾನ ಬೆಳಗ್ಗೆ ೮.೩೦ಕ್ಕೆ ಆರಂಭವಾಗಲಿದೆ.

ಇದೇ ವೇಳೆ ಕ್ಯಾಲಿಫೋರ್ನಿಯಾದ ಇಂಗಲ್‌ವುಡ್‌ನಲ್ಲಿರುವ ಲಾಸ್ ಏಂಜಲೀಸ್ ಕ್ರೀಡಾಂಗಣದಲ್ಲಿ ನಡೆದ ೩೨ ರ  ಸುತ್ತಿನ ಮತ್ತೊಂದು ಪಂದ್ಯದಲ್ಲಿ ಸ್ಪೇನ್ ತಂಡ, ಆಸ್ಟ್ರಿಯಾವನ್ನು ೩-೦ ಗೋಲುಗಳಿಂದ ಸೋಲಿಸಿ, ೧೬ ರ ಸುತ್ತಿಗೆ ಮುನ್ನಡೆದಿದೆ.

____________

ಭಾರತ ಮತ್ತು ಶ್ರೀಲಂಕಾ ಪುರುಷರ ತಂಡಗಳ ನಡುವಿನ ಎರಡು ಪಂದ್ಯಗಳ ಟೆಸ್ಟ್ ಸರಣಿಯ ವೇಳಾಪಟ್ಟಿಯನ್ನು ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ಪ್ರಕಟಿಸಿದ್ದು, ಮುಂದಿನ ತಿಂಗಳು ೧೫ ರಿಂದ ೨೭ ರವರೆಗೆ ಪಂದ್ಯಾವಳಿ ನಡೆಯಲಿದೆ.

ಮೊದಲ ಟೆಸ್ಟ್ ಪಂದ್ಯ ಮುಂದಿನ ತಿಂಗಳು ೧೫ ರಿಂದ ಗಾಲೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಎರಡನೇ ಟೆಸ್ಟ್ ಪಂದ್ಯ ಮುಂದಿನ ತಿಂಗಳು ೨೩ ರಿಂದ ಕೊಲಂಬೊದ ಸಿಂಹಳೀಸ್ ಸ್ಪೋರ್ಟ್ಸ್ ಕ್ಲಬ್‌ನಲ್ಲಿ ನಡೆಯಲಿದೆ.

______ ಮುಕ್ತಾಯ _____